ಕರ್ನಾಟಕ ರಕ್ಷಣಾ ವೇದಿಕೆ

# ಕಾವೇರಿ: ಹಲವೆಡೆ ಪ್ರತಿಭಟನೆ, ರೈಲು ತಡೆ

ಬೆಂಗಳೂರು, ಫೆ.6- ಕಾವೇರಿ ನ್ಯಾಯಾಧಿಕರಣದ ತೀರ್ಪಿನ ವಿರುದ್ಧ ರಾಜ್ಯಾದ್ಯಂತ ವ್ಯಾಪಕ ಪ್ರತಿಭಟನೆ ವ್ಯಕ್ತವಾಗಿದ್ದು, ರೈಲು ತಡೆ, ರಸ್ತೆತಡೆ, ಪ್ರತಿಕೃತಿ ದಹನ ನಡೆಸಲಾಯಿತು.

**ಮೈಸೂರು ವರದಿ:** ಮೈಸೂರು, ಮಂಡ್ಯದಲ್ಲಿ ರಸ್ತೆತಡೆ, ಪ್ರತಿಭಟನೆಗಳು ಮುಂದುವರಿದಿವೆ. ಮಂಡ್ಯದಲ್ಲಿ ಕಾರಾಗೃಹದ ಕೈದಿಗಳೂ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿ ಉಪವಾಸ ಸತ್ಯಾಗ್ರಹ ನಡೆಸಿದ್ದರೆ, ಕಾವೇರಿ ಕಣಿವೆಯಲ್ಲಿ ವಕೀಲರ ಸಂಘಟನೆಗಳೂ ಚಳವಳಿಗೆ ಧುಮುಕಿವೆ.

**ಚಾಮರಾಜನಗರ:** ವಿವಿಧ ಸಂಘಟನೆಗಳು ನೀಡಿದ್ದ ಬಂದ್‌ಗೆ ವ್ಯಾಪಕ ಬೆಂಬಲವಾಯಿತಲ್ಲದೇ, ಜನಸಂಚಾರ ಅಸ್ತವ್ಯಸ್ತಗೊಂಡಿತ್ತು. ಅಂಗಡಿ ಮುಂಗಟ್ಟುಗಳು, ಚಿತ್ರ ಮಂದಿರಗಳು, ಮಾರುಕಟ್ಟೆ ಎಲ್ಲವೂ ನಿರ್ಜನವಾಗಿತ್ತು.

ಕಾವೇರಿ ನ್ಯಾಯಮಂಡಳಿ ತೀರ್ಪನ್ನು ವಿರೋಧಿಸಿ ಆಚರಿಸಲಾದ ಚಾ.ನಗರ ಬಂದ್ ಹಾಗೂ ಪ್ರತಿಭಟನಾ ಮೆರವಣಿಗೆಯಲ್ಲಿ ಗಡಿ ಜಿಲ್ಲೆಯ ಸಾವಿರಕ್ಕೂ ಹೆಚ್ಚು ಮಂದಿ ತಮಿಳಿಗರು ಭಾಗವಹಿಸಿದ್ದು ವಿಶೇಷವಾಗಿತ್ತು.

**ಮಂಡ್ಯ:** ಜಿಲ್ಲೆಯಲ್ಲಿ ಕಾವೇರಿ ಚಳವಳಿ ಗಂಭೀರ ಸ್ವರೂಪ ಪಡೆದುಕೊಂಡಿದೆ. ಎಲ್ಲೆಡೆ ಬೀದಿಗಿಳಿದ ರೈತರು ಪ್ರತಿಭಟನಾ ಮೆರವಣಿಗೆ, ರಸ್ತೆ-ರೈಲು ತಡೆ, ಬಂದ್ ನಡೆದವು.

**ದಾವಣಗೆರೆ:** ಕಾವೇರಿ ನ್ಯಾಯಾಧೀಕರಣದ ತೀರ್ಪು ವಿರೋಧಿಸಿ ಪ್ರಗತಿಪರ ಸಂಘಟನೆಗಳ ಒಕ್ಕೂಟ, ರೈತ ಸಂಘದ ಹಸಿರು ಸೇನೆ, ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಮಂಗಳವಾರ ಪ್ರತ್ಯೇಕ ಪ್ರತಿಭಟನೆ ನಡೆಸಿದರು.

**ರೈಲು ತಡೆ:** ಚಿತ್ರದುರ್ಗ ರೈಲು ನಿಲ್ದಾಣದಲ್ಲಿ ಹೊಸಪೇಟೆ-ಬೆಂಗಳೂರು ರೈಲನ್ನು ಕೆಲ ಕಾಲ ತಡೆದು ಪ್ರತಿಭಟನೆ ನಡೆಸಲಾಯಿತು.

- **ರೈಲು-ರಸ್ತೆ ತಡೆ, ಪ್ರತಿಕೃತಿ ದಹನ**
- **ತಮಿಳು ಸಂಘಟನೆಗಳ ಬೆಂಬಲ**
- **ಕೈದಿಗಳ ಬೆಂಬಲ, ಉಪವಾಸ**
- **ಮಲೆನಾಡಿಗೂ ಕಾವೇರಿ ಬಿಸಿ**

ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಎಂ.ಎಚ್. ಶಶಿಧರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಕೆ.ಎಂ. ವೀರೇಶ್ ಪ್ರತಿಭಟನೆ ನೇತೃತ್ವವಹಿಸಿದ್ದರು.

**ಶಿವಮೊಗ್ಗ:** ಕಾವೇರಿ ನ್ಯಾಯಾಧಿಕರಣದ ತೀರ್ಪನ್ನು ಖಂಡಿಸಿ ಕನ್ನಡಪರ, ರೈತಪರ ಸಂಘಟನೆಗಳು ಜಿಲ್ಲೆಯಲ್ಲಿ ಮಂಗಳವಾರ ಪ್ರತಿಭಟನೆ, ರಸ್ತೆ, ರೈಲು ತಡೆ ನಡೆಸಿದವು.

ರಾಜ್ಯದಲ್ಲಿ ಕಾವೇರಿ ನದಿ ನೀರು ಹಾಸನ, ಕೊಡಗು, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರಿಗೆ ಸೀಮಿತವಾದರೂ ಕಾವೇರಿ ಕಣಿವೆ ರೈತರಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ಮಲೆನಾಡಿಗರು ಸಿಡಿದು ನಿಂತಿದ್ದಾರೆ. ಕಾವೇರಿ ನೀರು ಬಳಸುವುದು ರಾಜ್ಯದ ಜನತೆಯ ಹಕ್ಕು ಎಂದು ಪ್ರತಿಪಾದಿಸುತ್ತಿದ್ದಾರೆ.

**ಹುಬ್ಬಳ್ಳಿ:** ಕಾವೇರಿ ನ್ಯಾಯಾಧಿಕರಣದ ತೀರ್ಪನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಮಂಗಳವಾರ ಬೆಳಗ್ಗೆ ಕಿತ್ತೂರ ಚೆನ್ನಮ್ಮ ವರ್ತುಳದಲ್ಲಿ ಮಾನವ ಸರಳಿ ಮೂಲಕ ರಸ್ತೆ ತಡೆ ನಡೆಸಿ, ಪ್ರತಿಕೃತಿ ದಹನ ಮಾಡಿ ಆಕ್ರೋಶ ವ್ಯಕ್ತಪಡಿಸಿದರು.

ಕನ್ನಡ ಬಾವುಟ ಹಿಡಿದು ಘೋಷಣೆ ಕೂಗುತ್ತ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು. ಕಾರ್ಯಕರ್ತರು ವಾಹನಗಳನ್ನು ತಡೆಯಲು ಮುಂದಾಗುತ್ತಿದಂತೆ ಸ್ವಲ್ಪ ಸಮಯ ಗದ್ದಲದ ವಾತಾವರಣ ಉಂಟಾಯಿತು. ಪೊಲೀಸ್‌ರ ಸಕಾಲಿಕ ಮಧ್ಯಸ್ಥಿಕೆಯಿಂದಾಗಿ ತಿಳಿಗೊಂಡಿತು.

**ಚಿಕ್ಕಮಗಳೂರು:** ಕನ್ನಡ ಪರ ಸಂಘಟನೆಗಳು, ಆಟೋ ರಿಕ್ಷಾ ಚಾಲಕರು ಮತ್ತು ಮಾಲಿಕರ ಸಂಘದ ನೇತೃತ್ವದಲ್ಲಿ ನಗರ ಮತ್ತು ಕಡೂರಿನಲ್ಲಿ ಮಂಗಳವಾರ ರಸ್ತೆ ತಡೆ ನಡೆಸಿದ 35 ಕ್ಕೂ ಹೆಚ್ಚು ಕಾರ್ಯಕರ್ತರನ್ನು ಪೊಲೀಸರು ಬಂಧಿಸಿ ನಂತರ ಬಿಡುಗಡೆ ಮಾಡಿದರು.

**ಕರ್ನಾಟಕ ರಕ್ಷಣಾ ವೇದಿಕೆ**

## ಕಾವೇರಿ ತೀರ್ಪಿನ ವಿರುದ್ಧ ಪ್ರತಿಭಟನೆ, ನಾರಾಯಣ ಗೌಡ ಹಾಗು ಉಳಿದ ಕ.ರ.ವೇ ಪದಾಧಿಕಾರಿಗಳಿಂದ ಉರುಳು ಸೇವೆ



# ಕರ್ನಾಟಕ ರಕ್ಷಣಾ ವೇದಿಕೆ

## ಕೆರಳಿದ ಕನ್ನಡಿಗರು

### ಚಾಮರಾಜನಗರದಿಂದ ಬೀದರ್‌ವರೆಗೆ ಹರಡಿದ ಕಾವೇರಿ ಬೆಂಕಿ - ಕುದಿಯುತ್ತಿರುವ ಮಂಡ್ಯ

**ಎಲ್ಲೆಡೆ ಬಂದ್ ಆರಂಭ     ಗುರುವಾರ ಕರ್ನಾಟಕ ಬಂದ್**



ಬೆಂಗಳೂರು, ಫೆ.6- ರಾಜ್ಯದ ಜೀವನಾಡಿ ಕಾವೇರಿ ನದಿ ನೀರು ಹಂಚಿಕೆ ಕುರಿತಂತೆ ಕಾವೇರಿ ನ್ಯಾಯಾಧೀಕರಣ ನೀಡಿದ ಅಂತಿಮ ತೀರ್ಪಿಗೆ ಹಳೇ ಮೈಸೂರು ಪ್ರಾಂತ್ಯದ ಜನತೆ ಪ್ರತಿಭಟನೆಯ ಪ್ರತಿಕ್ರಿಯೆ ವ್ಯಕ್ತಪಡಿಸಿದ್ದಾರೆ. ನಿನ್ನೆ ಮಧ್ಯಾಹ್ನ ತೀರ್ಪು ಪ್ರಕಟಗೊಳ್ಳುತ್ತಿದ್ದಂತೆ ಆರಂಭಗೊಂಡ ಪ್ರತಿಭಟನೆ ಇಂದು ಇನ್ನಷ್ಟು ಕಾವೇರತೊಡಗಿದೆ. ತುಮಕೂರು, ಕೋಲಾರ, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಪ್ರತಿಭಟನೆ ಭುಗಿಲೆದ್ದಿದೆ. ರಾಜಧಾನಿ ಬೆಂಗಳೂರಿನಲ್ಲಿ ಪ್ರಕ್ಷುಬ್ಧ ವಾತಾವರಣ ನಿರ್ಮಾಣಗೊಂಡಿದ್ದು, ಅಲ್ಲಲ್ಲಿ ಪ್ರತಿಭಟನೆ, ರಸ್ತೆ ತಡೆ ನಡೆಯುತ್ತಿದೆ. ಸದಾ ವಾಹನಗಳಿಂದ ಗಿಜಿಗುಡುತ್ತಿದ್ದ ಬೆಂಗಳೂರು-ಹೊಸೂರು ರಸ್ತೆ ಸಂಪರ್ಕ ಕಡಿದುಕೊಂಡಿದೆ.

ಮೈಸೂರು ಬ್ಯಾಂಕ್ ವೃತ್ತದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಉರುಳು ಸೇವೆ ಮೂಲಕ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಹೆಬ್ಬಗೋಡಿ, ರಾಜಾಜಿನಗರ ಮತ್ತಿತರ ಕಡೆಗಳಲ್ಲೂ ಕನ್ನಡಪರ ಸಂಘಟನೆಗಳು ಪ್ರತಿಭಟನಾ ಮೆರವಣಿಗೆ ನಡೆಸಿವೆ. ಕೆಲವೆಡೆ ಬಸ್ಸಿಗೆ ಬೆಂಕಿ ಹಚ್ಚುವ ಪ್ರಯತ್ನವೂ ನಡೆದಿದೆ. ನಿತ್ಯ ಬಿಡುವಿಲ್ಲದೆ ವಹಿವಾಟು ನಡೆಸುತ್ತಿದ್ದ ಆರ್‌ಎಂಸಿ ಯಾರ್ಡ್ ಪುನಃ ಬಂದ್ ಆಚರಿಸಿದೆ. ಬೆಂಗಳೂರಿನಿಂದ ತಮಿಳುನಾಡು, ಕೇರಳ ಹಾಗೂ ಮೈಸೂರು ಮಾರ್ಗದ ಬಸ್ ಸಂಚಾರ ಸ್ಥಗಿತಗೊಂಡಿದೆ. ಬಸ್ಸಿಲ್ಲದೇ ಪ್ರಯಾಣಿಕರು ಪರದಾಡುತ್ತಿರುವ ದೃಶ್ಯ ಸಾಮಾನ್ಯವಾಗಿತ್ತು.

ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸರು ಗರಿಷ್ಠ ಭದ್ರತೆ ಒದಗಿಸಿದ್ದು, ಎಲ್ಲೆಡೆ ಬಿಗಿ ಪೊಲೀಸ್ ಬಂದೋಬಸ್ತ್ ಹಾಗೂ ಗಸ್ತಿನ ವ್ಯವಸ್ಥೆ ಮಾಡಲಾಗಿದೆ. ಇದರಿಂದ ಈ ತನಕ ಯಾವುದೇ ಅಹಿತಕರ ಘಟನೆ ನಡೆದ ವರದಿಯಾಗಿಲ್ಲ. ದೊಡ್ಡಬಳ್ಳಾಪುರ, ಚನ್ನಪಟ್ಟಣ, ತುಮಕೂರಿನಲ್ಲಿ ತೀರ್ಪು ವಿರೋಧಿಸಿ ರೈಲು ತಡೆ ನಡೆಸಲಾಗಿದೆ.

ಮುಳಬಾಗಿಲು, ಮಾಲೂರು ಸೇರಿದಂತೆ ಕೋಲಾರ ಜಿಲ್ಲೆಯಲ್ಲಿ ಬಂದ್ ಆರಂಭಗೊಂಡಿದೆ. ಅಂಗಡಿ, ಮುಂಗಟ್ಟುಗಳು ಮುಚ್ಚಿವೆ. ತುಮಕೂರು, ತಿಪಟೂರು, ಅರಸೀಕೆರೆಯಲ್ಲಿ ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ತುಮಕೂರಿನಲ್ಲಿ ಬೆಂಗಳೂರು- ಹುಬ್ಬಳ್ಳಿ ಪುಷ್‌ಪುಲ್ ರೈಲು ತಡೆದು ಪ್ರತಿಭಟನೆ ವ್ಯಕ್ತಪಡಿಸಲಾಗಿದೆ. ಹುಬ್ಬಳ್ಳಿ, ಗುಲ್ಬರ್ಗಗಳಲ್ಲಿ ತೀರ್ಪಿನ ವಿರುದ್ಧ ಪ್ರತಿಭಟನೆ ನಡೆಸಲಾಗುತ್ತಿದೆ.

## ಬಾಗೇಪಲ್ಲಿಯಲ್ಲಿ ರಸ್ತೆ ತಡೆ

ಬಾಗೇಪಲ್ಲಿ, ಫೆ.7-ಕಾವೇರಿ ನ್ಯಾಯ ಮಂಡಳಿ ತೀರ್ಪನ್ನು ವಿರೋಧಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು.

ಇಲ್ಲಿನ ಎಚ್.ನರಸಿಂಹಯ್ಯ ವೃತ್ತದಿಂದ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಬಂದ ಕಾರ್ಯಕರ್ತರು 1 ಗಂಟೆಗೂ ಹೆಚ್ಚು ಕಾಲ ವಾಹನಗಳನ್ನು ತಡೆದು ಪ್ರತಿಭಟನೆ ನಡೆಸಿದರು.

ತಾಲ್ಲೂಕು ರಕ್ಷಣಾ ವೇದಿಕೆ ಅಧ್ಯಕ್ಷ ಚಂದ್ರಶೇಖರ್ ಹಾಗೂ ಕಾರ್ಯದರ್ಶಿ ಬಿ.ಟಿ.ಸೀನ ಸೇರಿದಂತೆ ನೂರಾರು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡರು.

## ಅರಸೀಕೆರೆಯಲ್ಲಿ ತೀರ್ಪು ವಿರೋಧಿಸಿ ರೈಲು ತಡೆ

ಅರಸೀಕೆರೆ, ಫೆ.6–ಕಾವೇರಿ ನ್ಯಾಯ ಮಂಡಳಿ ತೀರ್ಪಿನಿಂದ ರಾಜ್ಯಕ್ಕೆ ತುಂಬಾ ಅನ್ಯಾಯವಾಗಿದೆ ಎಂದು ನಿನ್ನೆ ಸಂಜೆ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಇಂಟರ್ ಸಿಟಿ ಎಕ್ಸ್‌ಪ್ರೆಸ್ ರೈಲನ್ನು 10 ನಿಮಿಷ ತಡೆದು ಪ್ರತಿಭಟನೆ ನಡೆಸಲಾಯಿತು.

ರಕ್ಷಣಾ ವೇದಿಕೆಯ ನೂರಾರು ಕಾರ್ಯಕರ್ತರು ತೀರ್ಪಿನ ವಿರುದ್ಧ ಘೋಷಣೆ ಕೂಗುತ್ತಾ ಪಟ್ಟಣದ ತುಂಬಾ ಸಂಚರಿಸಿ, ಬೆಂಗಳೂರು–ಹೊನ್ನಾವರ ರಾಷ್ಟ್ರೀಯ ಹೆದ್ದಾರಿ 206ರಲ್ಲಿ ಮುಕ್ಕಾಲು ಗಂಟೆ ರಸ್ತೆ ತಡೆ ಸಹ ನಡೆಸಿ ತೀವ್ರ ಪ್ರತಿಭಟನೆ ಕೈಗೊಂಡರು.

ಇಂಟರ್ ಸಿಟಿ ಎಕ್ಸ್‌ಪ್ರೆಸ್ ರೈಲು ಸಂಜೆ 5.15ಕ್ಕೆ ಬರಬೇಕಾಗಿದುದ್ದು ನಿನ್ನೆ ಸಂಜೆ 5.55ಕ್ಕೆ ಬಂದಿತು. ಅಲ್ಲೇ ಕಾದಿದ್ದ ರಕ್ಷಣಾ ವೇದಿಕೆ ಕಾರ್ಯಕರ್ತರು ರೈಲನ್ನು 6.50ರವರೆಗೂ ತಡೆದು ಪ್ರತಿಭಟಿಸಿದರು. ಇದೇ ಸಂದರ್ಭದಲ್ಲಿ ಇಲ್ಲಿ ಹಾಜರಿದ್ದ ಮಾಜಿ ಸಚಿವೆ ಬಿ.ಟಿ.ಲಲಿತಾನಾಯಕ್ ಪ್ರತಿಭಟನಾಕಾರರೊಂದಿಗೆ ಸೇರಿಕೊಂಡರು.

ನಂತರ ಮಾತನಾಡಿದ ಅವರು, ಕಾವೇರಿ ನ್ಯಾಯಾಧೀಕರಣದ ತೀರ್ಪಿನಿಂದ ರಾಜ್ಯದ ರೈತರಿಗೆ ಕುತ್ತಿಗೆಗೆ ಉರುಳು ಬಿದ್ದಂತಾಗಿದೆ ಎಂದರಲ್ಲದೆ, ಕೇಂದ್ರ ಸರ್ಕಾರಕ್ಕೆ ರಾಜ್ಯಕ್ಕೆ ಮಲತಾಯಿ ಧೋರಣೆ ತೋರುತ್ತಿರುವುದು ಮತ್ತೊಮ್ಮೆ ಸಾಬೀತಾಗಿದೆ ಎಂದರು.

ಬಂದ್ ಮತ್ತು ಪ್ರತಿಭಟನೆಗಳನ್ನು ಅಹಿಂಸಾತ್ಮಕವಾಗಿ ಕೈಗೊಳ್ಳಬೇಕೆಂದು ಮನವಿ ಮಾಡಿದ ಲಲಿತಾನಾಯಕ್ ರೈತರ ಬೆಂಬಲಕ್ಕೆ ನಿಲ್ಲುವುದಾಗಿ ಹೇಳಿದರು. ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಹೇಮಂತ್ ಕುಮಾರ್ ಮಾತನಾಡಿ, ಕಾವೇರಿ ನ್ಯಾಯಮಂಡಳಿಯ ಈ ತೀರ್ಪಿನಿಂದ ರಾಜ್ಯದ ಜನತೆಗೆ ತೀವ್ರ ನಿರಾಸೆ, ನೋವು ಉಂಟಾಗಿದೆ ಎಂದರು. ಅಲ್ಲದೆ ತೀರ್ಪು ಸಂಪೂರ್ಣವಾಗಿ ತಮಿಳುನಾಡಿನ ಪರವಾಗಿದೆ. ಇದರಲ್ಲಿ ನ್ಯಾಯಕ್ಕಿಂತ ರಾಜಕೀಯವೇ ಹೆಚ್ಚು ಕೆಲಸ ಮಾಡಿರುವುದು ಮೇಲ್ನೋಟದಲ್ಲಿ ಕಾಣಿಸುತ್ತಿದೆ ಎಂದರು.

ರಾಜ್ಯದ ರೈತರ ರಕ್ಷಣೆಗಾಗಿ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡರ ನೇತೃತ್ವದಲ್ಲಿ ಇನ್ನೂ ಉಗ್ರ ಹೋರಾಟ ಹಮ್ಮಿಕೊಳ್ಳುವುದು ಎಂದರು. ಕರವೇ ಗೌರವಾಧ್ಯಕ್ಷ ಬಾಣಾವರ ಲಕ್ಷ್ಮೀಶ್, ನಗರಾಧ್ಯಕ್ಷ ಕಿರಣ್‌ಗೌಡ ಈ ಸಂದರ್ಭದಲ್ಲಿ ರೈತಪರವಾಗಿ ಮಾತನಾಡಿದರು.

## ಕಾವೇರಿ ತೀರ್ಪು: ಹಾಸನದಲ್ಲಿ ತೀವ್ರ ಪ್ರತಿಭಟನೆ

ಹಾಸನ, ಫೆ.6–ಹಾಸನ ನಗರದಲ್ಲಿ ಕಾವೇರಿ ನ್ಯಾಯಮಂಡಳಿ ಅಂತಿಮ ತೀರ್ಪು ವಿರುದ್ಧ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರು ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ನಗರದ ಶಾಲಾ ಕಾಲೇಜುಗಳು ಪ್ರಾರಂಭವಾಗುತ್ತಿದ್ದನ್ನು ಕಂಡ ರಕ್ಷಣಾವೇದಿಕೆಯ ಕಾರ್ಯಕರ್ತರು ಮುಚ್ಚಿಸುವಲ್ಲಿ ಯಶಸ್ವಿಯಾದರು.

ಅಂಗಡಿ ಮುಗ್ಗಟ್ಟುಗಳನ್ನು ಮುಚ್ಚಿಸಿ ಬಂದ್ ಮಾಡಲು ಯತ್ನಿಸುತ್ತಿದ್ದಾಗ ತಕ್ಷಣ ಮಧ್ಯ ಪ್ರವೇಶಿಸಿದ ಪೊಲೀಸರು ಇಂದು ಬಂದ್ ಮಾಡುವುದು ಬೇಡ, 8ರಂದು ಕರೆ ನೀಡಿರುವ ಬಂದ್ ಸಂದರ್ಭದಲ್ಲಿ ನೀವು ಬಂದ್ ಆಚರಿಸಿ, ಪ್ರತಿಭಟನೆ ನಡೆಸಿ ಎಂದು ವಿವರಿಸಿದಾಗ ಕಾರ್ಯಕರ್ತರು, ಕೇಂದ್ರ ಸರ್ಕಾರದ ಮಲತಾಯಿ ಧೋರಣೆಯನ್ನು ಹಾಗೂ ತಮಿಳುನಾಡಿನ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ, ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ತಮಿಳುನಾಡಿನ ಟಿ.ವಿ. ಚಾನೆಲ್ ಸ್ಥಗಿತಗೊಳಿಸಲಾಯಿತು. ಪ್ರತಿಭಟನೆಯಲ್ಲಿ ಸುಮಾರು 200 ಕ್ಕೂ ಹೆಚ್ಚು ಕಾರ್ಯಕರ್ತರು ಭಾಗವಹಿಸಿದ್ದರು.

# ಮೈಸೂರಿನಲ್ಲಿ ತಾರಕಕ್ಕೇರಿದ ಕಾವೇರಿ ಕಾವು

## ನೂರಾರು ಸೆರೆ

ಮೈಸೂರು, ಫೆ.6– ಕಾವೇರಿ ನ್ಯಾಯಾಧೀಕರಣದ ತೀರ್ಪು ಪ್ರತಿಭಟಿಸಿ ಇಂದು ಮೈಸೂರಿನಲ್ಲಿ ಕರ್ನಾಟಕ ರಕ್ಷಣಾವೇದಿಕೆ ಕಾರ್ಯಕರ್ತರು ಹಾಗೂ ಎಲ್ಲ ಪಕ್ಷಗಳ ಮುಖಂಡರು ರಸ್ತೆ ತಡೆ ನಡೆಸಿ ಪ್ರತಿಭಟಿಸಿದರು. ಬೆಳಗ್ಗೆ ಕೆ.ಆರ್. ಸರ್ಕಲ್‌ಗೆ ಆಗಮಿಸಿದ ರಕ್ಷಣಾವೇದಿಕೆಯ ನೂರಾರು ಕಾರ್ಯಕರ್ತರು ಹಾಗೂ ಕಾಂಗ್ರೆಸ್, ಬಿಜೆಪಿ, ಸಮಾಜವಾದಿ ಪಕ್ಷ, ರೈತ ಹೋರಾಟ ಸಮಿತಿಯ ಸಾವಿರಾರು ಕಾರ್ಯಕರ್ತರು ರಸ್ತೆ ತಡೆ ನಡೆಸಿ ಭೂತದಹನ ನಡೆಸುವುದರ ಮೂಲಕ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಸದಾ ಜನಜಂಗುಳಿ ಹಾಗೂ ಬಸ್‌ನಿಂದ ಗಿಜುಗುಡುತ್ತಿದ್ದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಕೆ.ಆರ್. ಸರ್ಕಲ್ ಸೇರಿದಂತೆ ನಗರದ ಎಲ್ಲ ಪ್ರಮುಖ ನಿಲ್ದಾಣಗಳು ಸಾರ್ವಜಕರಿಲ್ಲದೆ ಬಿಕೋ ಎನ್ನುತ್ತಿದ್ದವು. ಮುನ್ನೆಚ್ಚರಿಕೆ ಕ್ರಮವಾಗಿ ಶಾಲಾ ಕಾಲೇಜುಗಳಿಗೆ ರಜೆ ನೀಡಲಾಗಿತ್ತು. ಬೆಳಗ್ಗೆ ಸರ್ಕಾರಿ ಹಾಗೂ ಖಾಸಗಿ ಬಸ್‌ಗಳ ಸಂಚಾರ ಆರಂಭವಾಯಿತಾದರೂ ನಂತರ ಸಾರ್ವಜನಿಕರಿಂದ ತೀವ್ರ ಪ್ರತಿಭಟನೆ ವ್ಯಕ್ತವಾಗಿದ್ದರಿಂದ ಸಂಚಾರ ಸ್ಥಗಿತಗೊಂಡಿತು.

ಅಂಗಡಿ ಮಾಲೀಕರು ತಮ್ಮ ದೈನಂದಿನ ವ್ಯಾಪಾರ ವಹಿವಾಟನ್ನು ನಿಲ್ಲಿಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ರೈಲ್ವೆ ನಿಲ್ದಾಣದಲ್ಲಿ ಕೂಡ ಜನರಿಲ್ಲದೆ ಖಾಲಿ ಹೊಡೆಯುತ್ತಿತ್ತು. ಒಟ್ಟಿನಲ್ಲಿ ಮೈಸೂರು ನಗರ ಸಂಪೂರ್ಣವಾಗಿ ಕುದಿಯುತ್ತಿದ್ದು ಯಾವುದೇ ಕ್ಷಣದಲ್ಲಿ ಪರಿಸ್ಥಿತಿ ಭುಗಿಲೇಳುವ ಸಾಧ್ಯತೆ ಇದೆ.

**ಕ.ರ.ವೇ. ಕಾರ್ಯಕರ್ತರ ಬಂಧನ:**
ಕೆ.ಆರ್. ವೃತ್ತದಲ್ಲಿ ಅಂಗಡಿಗಳನ್ನು ಬಲವಂತವಾಗಿ ಮುಚ್ಚಿಸಲು ಯತ್ನಿಸಿದ ಕರ್ನಾಟಕ ರಕ್ಷಣಾ ವೇದಿಕೆಯ ನಗರಾಧ್ಯಕ್ಷ ಮೋಹನ್‌ಕುಮಾರ್ ಗೌಡ ಸೇರಿದಂತೆ ನೂರಾರು ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದರು. ಕೆಲವು ಅಂಗಡಿಗಳು ಎಂದಿನಂತೆ ತಮ್ಮ ವ್ಯಾಪಾರ ವಹಿವಾಟವನ್ನು ಆರಂಭಿಸಿದ್ದರಿಂದ ರಕ್ಷಣಾ ವೇದಿಕೆ ಕಾರ್ಯಕರ್ತರು ಅಂಗಡಿಗಳನ್ನು ಬಲವಂತವಾಗಿ ಮುಚ್ಚಿಸಲು ಮುಂದಾದರು.

ಈ ವೇಳೆ ಅಂಗಡಿ ಮಾಲೀಕರಿಗೂ ಹಾಗೂ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆದಿದ್ದರಿಂದ ಪೊಲೀಸರು ಬಂಧಿಸಿದರು. ಈ ಮಧ್ಯೆ ಬಿಜೆಪಿ, ಕಾವೇರಿ ಕಣಿವೆ ಎಲ್ಲ ಜಿಲ್ಲೆಗಳಲ್ಲಿ ರಸ್ತೆ ತಡೆ ನಡೆಸುವಂತೆ ಪಕ್ಷದ ಕಾರ್ಯಕರ್ತರಿಗೆ ಸೂಚಿಸಿದೆ.

ಕಾವೇರಿಯ ಕಾವು ಗಂಟೆ ಗಂಟೆಗೂ ಕಾವೇರುತ್ತಿದ್ದು, ರೈತರಿಂದ ಯಾವುದೇ ಸಂದರ್ಭದಲ್ಲಿಯೂ ಆಕ್ರೋಶ ಭುಗಿಲೇಳುವ ಸಾಧ್ಯತೆ ಇದೆ. ಈ ಮಧ್ಯೆ ಪೊಲೀಸರು ಮುನ್ನೆಚ್ಚರಿಕೆ ಕ್ರಮವಾಗಿ ನಗರದಾದ್ಯಂತ ಭಾರಿ ಬಂದೋಬಸ್ತ್ ಏರ್ಪಡಿಸಿದ್ದಾರೆ. ಬೆಳಗ್ಗೆ ಕೆಎಸ್‌ಆರ್‌ಪಿ, ಕ್ಷಿಪ್ರ ಕಾರ್ಯಾಚರಣೆ ಪಡೆ ಯೋಧರು ನಗರದಾದ್ಯಂತ ಪಥ ಸಂಚಲನ ನಡೆಸಿ ಸಾರ್ವಜನಿಕರು ಭಯ ಭೀತಗೊಳ್ಳಬೇಡಿ ಎಂದು ಧ್ವನಿವರ್ಧಕಗಳ ಮೂಲಕ ಮನವಿ ಮಾಡಿದರು.

# ಕರ್ನಾಟಕ ರಕ್ಷಣಾ ವೇದಿಕೆ

## ಕಾವೇರಿ ನ್ಯಾಯ ಮಂಡಳಿಯ ತೀರ್ಪನ್ನು ವಿರೋಧಿಸಿ ರಸ್ತೆ ತಡೆ ಪ್ರತಿಭಟನೆ

ಹೊಸಪೇಟೆ, ಫೆ.೭- ಕಾವೇರಿ ನ್ಯಾಯಮಂಡಳಿಯ ತೀರ್ಪನ್ನು ವಿರೋಧಿಸಿ ಹಾಗೂ ತೀರ್ಪನ್ನು ಮರು ಪರಿಶೀಲನೆ ಮಾಡುವಂತೆ ಒತ್ತಾಯಿಸಿ ನಗರದಲ್ಲಿ ಮಂಗಳವಾರ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಘಟಕದ ಪದಾಧಿಕಾರಿಗಳು ರಸ್ತೆ ತಡೆ ಪ್ರತಿಭಟನೆ ನಡೆಸಿದರು.

ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿರುವ ರಕ್ಷಣಾ ವೇದಿಕೆ ಕಛೇರಿಯಿಂದ ಮೆರವಣಿಗೆ ಮೂಲಕ ಹೊರಟ ಕಾರ್ಯಕರ್ತರು, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಹಾಗೂ ರೋಟರಿ ವೃತ್ತದಲ್ಲಿ ಮಾನವ ಸರಪಳಿ ರಚಿಸುವ ಮೂಲಕ ಕೆಲಕಾಲ ರಸ್ತೆ ತಡೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವೇದಿಕೆ ಅಧ್ಯಕ್ಷ ಗುಜ್ಜಲನಾಗರಾಜ ಕಾರ್ಯದರ್ಶಿ ಹೆಚ್.ಮಹೇಶ್ ಹಾಗೂ ಪದಾಧಿಕಾರಿಗಳು ಕಾವೇರಿ ನ್ಯಾಯಮಂಡಳಿ ತೀರ್ಪಿನಿಂದ ರಾಜ್ಯಕ್ಕೆ ಅನ್ಯಾಯವಾಗಿದ್ದು, ಈ ಕುರಿತು ಮರುಪರಿಶೀಲನೆ ನಡೆಸುವಂತೆ ಒತ್ತಾಯಿಸಿದರು.

ನಂತರ ತಾಲೂಕು ಕಛೇರಿಗೆ ತೆರಳಿ ತಹಶೀಲ್ದಾರರಿಗೆ ಮನವಿ ಪತ್ರ ಸಲ್ಲಿಸಿದರು. ಮನವಿ ಪತ್ರ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ಜಗನ್ನಾಥ್ ಸಿರ್ಸಿ ವೇದಿಕೆಯ ಬೇಡಿಕೆಗಳ ಕುರಿತು ಸರ್ಕಾರದ ಗಮನಕ್ಕೆ ತರುವುದಾಗಿ ಹೇಳಿದರು.

ರಾಜ್ಯದ ರೈತರ ಜೀವನಾಡಿಯಾದ ಕಾವೇರಿ ನದಿ ನೀರಿನ ಹಂಚಿಕೆ ಕುರಿತು ನ್ಯಾಯ ಮಂಡಳಿ 17 ವರ್ಷಗಳ ನಂತರ ನೀಡಿರುವ ತೀರ್ಪು ರಾಜ್ಯಕ್ಕೆ ವಿರುದ್ಧ ವಾಗಿದ್ದು, ಇದನ್ನು ವೇದಿಕೆ ತೀವ್ರವಾಗಿ ಖಂಡಿಸುತ್ತದೆ. ಈ ಕುರಿತು ಎಲ್ಲಾ ರಾಜಕೀಯ ಪಕ್ಷಗಳು, ಸಂಘ ಸಂಸ್ಥೆಗಳು ಒಂದಾಗಿ ಸರ್ಕಾರದ ಜೊತೆಗೆ ನಿಲ್ಲುವ ಮೂಲಕ ಏಕ ಪಕ್ಷೀಯ ತೀರ್ಮಾನದ ವಿರುದ್ಧ ಮೇಲ್ಮನವಿ ಸಲ್ಲಿಸುವಂತೆ ವೇದಿಕೆ ಮನವಿ ಪತ್ರದಲ್ಲಿ ಒತ್ತಾಯಿಸಿದೆ.

ಪ್ರತಿಭಟನಾ ಮೆರವಣಿಗೆ ನೇತೃತ್ವವನ್ನು ರಕ್ಷಣಾ ವೇದಿಕೆ ತಾಲೂಕು ಘಟಕದ ಅಧ್ಯಕ್ಷ ಗುಜ್ಜಲ ನಾಗರಾಜ್, ಕಾರ್ಯದರ್ಶಿ ಹೆಚ್.ಮಹೇಶ್ ವಹಿಸಿದ್ದರು. ಪ್ರತಿಭಟನಾ ಮೆರವಣಿಗೆಯಲ್ಲಿ ಉಪಾಧ್ಯಕ್ಷ ಟಿ.ಹನುಮಂತಪ್ಪ, ಮುಖಂಡರುಗಳಾದ ಕೆ.ರಾಮಪ್ಪ, ನಪ್ಪಾಬಂದಿ, ಭಾಗ್ಯಲಕ್ಷ್ಮಿ, ಜೆ.ವೆಂಕೋಬಣ್ಣ, ಹನುಮೇಶ್, ಹುಲುಗಪ್ಪ, ಸೇರಿದಂತೆ ಪದಾಧಿಕಾರಿಗಳು ಭಾಗವಹಿಸಿದ್ದರು.

ಶೀಘ್ರವಾಗಿ ಕೊಡಿಸುವ ಭರವಸೆ ನೀಡಿದರು. ತಹಶೀಲ್ದಾರ್ ವಿಪುಲ್ ಬನ್ಸಾಲ್ ಮತ್ತು ಗೌತಮ್ ಸ್ಥಳಕ್ಕೆ ಭೇಟಿ ನೀಡಿದ್ದರು.

## ಮಾಲೂರು ಬಂದ್ ಯಶಸ್ವಿ

ಮಾಲೂರು, ಫೆ. ೭- ಕಾವೇರಿ ನ್ಯಾಯ ಮಂಡಳಿ ನೀಡಿರುವ ತೀರ್ಪು ರಾಜ್ಯದ ಹಿತಕ್ಕೆ ಮಾರಕವಾಗಿದೆ ಎಂದು ಆರೋಪಿಸಿರುವ ಕರ್ನಾಟಕ ರಕ್ಷಣಾ ವೇದಿಕೆ ಮಂಗಳವಾರ "ಮಾಲೂರು ಬಂದ್"ಗೆ ಕರೆ ನೀಡಿದ್ದು ಬಂದ್ ಸಂಪೂರ್ಣವಾಗಿ ಯಶಸ್ವಿಯಾಗಿದೆ.

ಕ.ರ.ವೇ.ಯ ನೂರಾರು ಕಾರ್ಯಕರ್ತರು ಪಟ್ಟಣದ ಬಾಲಾಜಿ ವೃತ್ತದ ಬಳಿ ಜಮಾಯಿಸಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ. ನ್ಯಾಯಾಧೀಕರಣದ ವಿರುದ್ಧ ಮತ್ತು ಕೇಂದ್ರ ಸರ್ಕಾರದ ಮಲತಾಯಿ ಧೋರಣೆಯ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಪ್ರತಿಕೃತಿ ದಹಿಸಿದರು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಕ.ರ.ವೇ. ತಾಲ್ಲೂಕು ಅಧ್ಯಕ್ಷ ಎಸ್. ಪ್ರಕಾಶ್, ಕಾವೇರಿ ಕಣಿವೆಯಲ್ಲಿ ಒಟ್ಟು 740 ಟಿ.ಎಂ.ಸಿ. ಎಫ್.ಟಿ. ನೀರಿನಲ್ಲಿ 419 ಟಿ.ಎಂ.ಸಿ. ಎಫ್.ಟಿ. ನೀರು ತಮಿಳುನಾಡಿಗೆ ಹಂಚಿಕೆ ಮಾಡಿರುವ ನ್ಯಾಯಾಧೀಕರಣದ ತೀರ್ಪಿನಿಂದ ರಾಜ್ಯಕ್ಕೆ ಅನ್ಯಾಯವಾಗಿದೆ.

ಪ್ರತಿ ವರ್ಷ 192 ಟಿ.ಎಂ.ಸಿ. ಎಫ್.ಟಿ. ನೀರನ್ನು ಕರ್ನಾಟಕ ಬಿಡಬೇಕೆಂದು ತೀರ್ಪಿನಲ್ಲಿ ತಿಳಿಸಿರುವುದು.

ರಾಜ್ಯಕ್ಕೆ ಹಾಗೂ ಪ್ರತಿಯೊಬ್ಬ ಕನ್ನಡಿಗನಿಗೂ ಅನ್ಯಾಯವಾಗಿದೆ. ಕಾವೇರಿ ನೀರಿನ ಹಂಚಿಕೆ ವಿವಾದ ಇತ್ಯರ್ಥಪಡಿಸಲು ರಚಿಸಲಾಗಿರುವ ನ್ಯಾಯ ಮಂಡಳಿಯ ತೀರ್ಪು ನೀಡಲು 16 ವರ್ಷ ತೆಗೆದುಕೊಂಡರೂ ಸಹ ನ್ಯಾಯ ಸಮ್ಮತ ತೀರ್ಪು ನೀಡಲು ಸಾಧ್ಯವಾಗದೆ ಇದೀಗ ಹೊರಬಿದ್ದಿರುವ ಅಂತಿಮ ನಿರ್ಧಾರದಂತೆ ಕರ್ನಾಟಕಕ್ಕೆ ಬಾರೀ ಆಘಾತವಾಗಿದೆ. ಇದನ್ನು ಸರಿಪಡಿಸದಿದ್ದಲ್ಲಿ ಕ.ರ.ವೇ. ಹಂತ-ಹಂತವಾಗಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು. ನೀರು ಹಂಚಿಕೆಯಲ್ಲಿ ನ್ಯಾಯಾಲಯ ಮೋರೆ ಹೋಗುವುದಕ್ಕಿಂತ ಎರಡು ರಾಜ್ಯಗಳ ರೈತರು ಮುಖಂಡರು, ಜನಪ್ರತಿನಿಧಿಗಳು, ಸೌಹಾರ್ದತೆಯಿಂದ ಒಪ್ಪಂದದ ಮೂಲಕ ನೀರಿನ ಸಮಸ್ಯೆಯನ್ನು ಬಗೆಹರಿಸಲು ಮುಂದಾಗಬೇಕೆಂದು ನುಡಿದರು.

ಬಂದ್ ವೇಳೆಯಲ್ಲಿ ಎಲ್ಲಾ ಅಂಗಡಿಮುಂಗ್ಗಟ್ಟುಗಳು, ಸರ್ಕಾರಿ ಶಾಲಾ ಕಾಲೇಜುಗಳು ಮುಚ್ಚಿದ್ದವು. ಸಂಚಾರ ಅಸ್ತವ್ಯಸ್ಥವಾಗಿ ಪ್ರಯಾಣಿಕರು ಪರದಾಡುವ ಸ್ಥಿತಿ ನಿರ್ಮಾಣವಾಗಿತ್ತು.

ಪ್ರತಿಭಟನೆಯಲ್ಲಿ ಕ.ರ.ವೇ. ನಗರ ಅಧ್ಯಕ್ಷ ಎನ್.ವಿ. ಮುರಳೀಧರ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಹುಲದನ ಮಂಜು, ಮುಖಂಡರುಗಳಾದ ಎಸ್.ಎಂ. ರಾಜು, ಎ.ಎನ್. ದಯಾನಂದ್, ಚಂಚಿರಾಜೇಶ್, ಸೋಮಶೇಖರ್, ಇನ್ನಿತರರು ಭಾಗವಹಿಸಿದ್ದರು.